ರಾಗ – ವರಾಳಿ : ತಾಳ – ಆದಿತಾಳ

ಬಾರೋ ನಮ್ಮ ಮನೆಗೆ ಗೋಪಾಲಕೃಷ್ಣ ।ಪ।

ಗೊಲ್ಲ ಬಾಲಕರನು ನಿಲ್ಲಿಸಿ ಪೆಗಲೇರಿ
ಗುಲ್ಲು ಮಾಡದೆ ಮೊಸರೆಲ್ಲ ಸವಿದ ಕೃಷ್ಣ ।೧।

ಕಸ್ತೂರಿ ತಿಲಕವ ಶಿಸ್ತಾಗಿ ಪಣೆಯೊಳಿಟ್ಟು
ಮಸ್ತಕದಲಿ ಪರವಸ್ತು ತೋರಿದ ಕೃಷ್ಣ ।೨।

ಮುಜ್ಜಗವನೆಲ್ಲ ಬೊಜ್ಜೆಯೊಳಗಿಟ್ಟು
ಗೆಜ್ಜೆಯ ಕಟ್ಟಿ ತಪ್ಪೆಜ್ಜೆಯನಿಕ್ಕುತ ।೩।

ನಾರೇರು ಬಿಚ್ಚಿಟ್ಟ ಸೀರೆಗಳನೆ ಪೊಯ್ದು
ಮ್ಯಾರೆ ಇಲ್ಲದೆ ಕರತೋರೆಂದ ಶ್ರೀಕೃಷ್ಣ ।೪।

ಅಂಗನೆಯರ ವ್ರತಭಂಗವ ಮಾಡಿದ
ರಂಗವಿಟ್ಠಲ ಭವಭಂಗವ ಪರಿಹರಿಸೊ ।೫।

ರಾಗ – ಧನ್ಯಾಸಿ : ತಾಳ – ಆದಿತಾಳ

ಪೋಪು ಹೋಗೋಣ ಬಾರೊ ರಂಗ
ಪೋಪು ಹೋಗೋಣ ಬಾರೊ ।ಪ।

ಜಾಹ್ನವೀಯ ತೀರವಂತೆ ಜನಕರಾಯನ ಕುವರಿಯಂತೆ
ಜಾನಕಿಯ ವಿವಾಹವಂತೆ ಜಾಣ ನೀ ಬರಬೇಕಂತೆ ।೧।

ಕುಂಡಿನೀಯ ನಗರವಂತೆ ಭೀಷ್ಮಕನ ಕುವರಿಯಂತೆ
ಶಿಶುಪಾಲನ ಒಲ್ಲಳಂತೆ ನಿನಗೆ ವಾಲೆ ಬರೆದಳಂತೆ ।೨।

ಪಾಂಡವರು ಕೌರವರಿಗೆ ಲೆತ್ತವಾಡಿ ಸೋತರಂತೆ
ರಾಜ್ಯವನ್ನು ಬಿಡಬೇಕಂತೆ ರಂಗವಿಟ್ಠಲ ಬರಬೇಕಂತೆ ।೩।

ರಾಗ – ಮಧ್ಯಮಾವತಿ : ತಾಳ – ಏಕತಾಳ

ಇಕ್ಕೋ ನೋಡೆ ರಂಗನಾಥನ ಪುಟ್ಟ ಪಾದವ ।ಪ।

ಸಿಕ್ಕಿತೆ ಶ್ರೀಲಕ್ಷ್ಮೀಪತಿಯ ದಿವ್ಯಪಾದವ ।ಅ ಪ।

ಶಂಖ ಚಕ್ರ ಗದಾಪದ್ಮ ಅಂಕಿತ ಪಾದವ
ಅಂಕುಶ ಕುಲಿಶ ಧ್ವಜರೇಖಾ ಅಂಕಿತ ಪಾದವ
ಪಂಕಜಾಸನನ ಹೃದಯದಲ್ಲಿ ನಲಿಯುವ ಪಾದವ
ಸಂಕಟಹರಣ ವೆಂಕಟೇಶನ ದಿವ್ಯ ಪಾದವ ।೧।

ಲಲನೆ ಲಕ್ಷ್ಮಿಯಂಕದಲ್ಲಿ ನಲಿಯುವ ಪಾದವ
ಜಲಜಾಸನನ ಅಭೀಷ್ಟವೆಲ್ಲ ಸಲಿಸುವ ಪಾದವ
ಮಲ್ಲರ ಗೆಲಿದು ಕಂಸಾಸುರನ ಕೊಂದ ಪಾದವ
ಬಲಿಯ ಮೆಟ್ಟಿ ಭಾಗೀರಥಿಯ ಪಡೆದ ಪಾದವ ।೨।

ಬಂಡೆಯ ಬಾಲೆಯ ಮಾಡಿದ ಉದ್ದಂಡ ಪಾದವ
ಬಂಡಿಲಿದ್ದ ಶಕಟಾಸುರನ ಒದ್ದ ಪಾದವ
ಅಂಡಜ ಹನುಮರ ಭುಜದೊಳೊಪ್ಪುವ ಪಾದವ
ಕಂಡೆವೆ ಶ್ರೀರಂಗವಿಟ್ಠಲನ ದಿವ್ಯಪಾದವ ।೩।

ರಾಗ – ಕಾಂಬೋದಿ : ತಾಳ – ಝಂಪೆತಾಳ

ಉತ್ತಮರ ಸಂಗ ಎನಗಿತ್ತು ಸಲಹೊ ।ಪ।

ಚಿತ್ತಜಜನಕ ಸರ್ವೋತ್ತಮ ಮುಕುಂದ ।ಅ ಪ।

ತಿರುತಿರುಗಿ ಬರಲಾರೆ ಪರರ ಬಾಧಿಸಲಾರೆ
ಪರಿಪರಿಯ ಪಾಪಗಳ ಮಾಡಲಾರೆ
ಮರಣ ಜನನಗಳೆರಡು ಪರಿಹರವ ಮಾಡಯ್ಯ
ಕರುಣಾಸಮುದ್ರ ಮುರವೈರಿ ಶ್ರೀಕೃಷ್ಣ ।೧।

ಏನ ಪೇಳಲಿ ದೇವ ನಾ ಮಾಡಿದ ಕರ್ಮ
ನಾನಾ ವಿಚಿತ್ರವೈ ಶ್ರೀನಿವಾಸ
ಹೀನಜನರೊಳಗಾಟ ಶ್ವಾನಾದಿಗಳ ಕೂಟ

ಜ್ಞಾನವಂತನ ಮಾಡೊ ಜಾನಕೀರಮಣ ।೨।

ನಿನ್ನ ನಂಬಿದ ಮೇಲೆ ಇನ್ನು ಭಯವ್ಯಾತಕೆ
ಪನ್ನಗಾಧಿಪಶಯನ ಮನ್ನಿಸಯ್ಯ
ಮುನ್ನ ಭಕುತರನೆಲ್ಲ ಚೆನ್ನಾಗಿ ಪಾಲಿಸಿದ
ಎನ್ನೊಡೆಯ ರಂಗವಿಟ್ಠಲ ಎನ್ನ ದೊರೆಯೇ ।೩।

ರಾಗ– ಆನಂದಭೈರವಿ : ತಾಳ – ಆದಿತಾಳ

ಇಟ್ಹಾಂಗೆ ಇರುವೆನೊ ಹರಿಯೆ ಎನ್ನ ದೊರೆಯೆ ।ಪ।

ಸೃಷ್ಟಿವಂದಿತ ಪಾದ ಪದುಮ ಶ್ರೀಹರಿಯೆ ।ಅ ಪ।

ಸಣ್ಣ ಶಾಲ್ಯೋದನ್ನ ಬೆಣ್ಣೆ ಕಾಸಿದ ತುಪ್ಪ
ಚಿನ್ನದ ಹರಿವಾಣದಲಿ ಭೋಜನ
ಘನ್ನ ಮಹಿಮ ನಿನ್ನ ಕರುಣ ತಪ್ಪಿದ ಮ್ಯಾಲೆ ಕ–
ದನ್ನ ಕಾಣದೆ ಬಾಯ್ಬಿಡಿಸುವಿ ಹರಿಯೆ ।೧।

ಕೆಂಪಿಲಿ ಪೊಳೆವ ಪೀತಾಂಬರ ಉಡಿಸುವಿ
ಸೊಂಪಿನಂಚಿನ ಶಾಲು ಹೊದಿಸುವಿಯೊ
ಕಪಿಲಹರೇ ನಿನ್ನ ಕೃಪೆಯು ತಪ್ಪಿದ ಮ್ಯಾಲೆ
ಕಪರ್ದಕ ಕೌಪೀನವು ದೊರೆಯದೊ ಹರಿಯೆ ।@।

ಚಂದ್ರಶಾಲೇಲಿ ಚಂದ್ರಕಿರಣದಂತೊಪ್ಪುವ
ಚಂದದ ಮಂಚದೋಳ್ಮಲಗಿಸುವಿ
ಮಂದರೋದ್ಧರ ನಿನ್ನ ಮಮತೆ ತಪ್ಪಲು ಧರ್ಮ
ಮಂದಿರದೊಳು ತೋಳ್ಮಲಗಿಂಬು ಹರಿಯೇ ।೩।

ನರಯಾನದೊಳು ನರವರನೆನಿಸುವಿ
ವರಛತ್ರ ಚಾಮರ ಹಾಕಿಸುವಿ
ಕರುಣಾನಿಧೇ ನಿನ್ನ ಕರುಣ ತಪ್ಪಿದ ಮ್ಯಾಲೆ
ಚರಣರಕ್ಷೆಯು ದೊರೆಯದು ಶ್ರೀಹರಿಯೇ ।೪।

ಗಂಗಾಜನಕ ಪಾಂಡುರಂಗ ನಿನ್ನಯ ಭಕ್ತರ
ಸಂಗವಿರಲಿ ದುಷ್ಟ ಸಂಗ ಬ್ಯಾಡ
ಅಂಗನೆಯರ ಕೂಡಿ ಅನಂಗಬಾಣಕೆ ಸಿಲುಕಿ

ಭಂಗವ ಪಡಲಾರೆ ಶ್ರೀರಂಗವಿಟ್ಠಲ ಹರಿಯೇ ।೫।

ರಾಗ – ಶಂಕರಾಭರಣ : ತಾಳ – ಆದಿತಾಳ

ಜೋ ಜೋ ಜೋ ಜೋ ರಂಗಧಾಮ
ಜೋಜೋ ಜೋಜೋ ಜೋ ರಣಭೀಮ ।ಪ।

ಜೋ ಜೋ ಭಕ್ತರ ಕಷ್ಟ ನಿರ್ಧೂಮ
ಜೋ ಜೋ ದಶರಥ ರಾಮ ನಿಸ್ಸೀಮ ।ಅ ಪ।

ಭೂಮಿಯ ಚಿನ್ನದ ತೊಟ್ಟಿಲ ಮಾಡಿ
ಸೋಮಸೂರ್ಯರೆಂಬ ಕಲಶವ ಹೂಡಿ
ನೇಮದಿ ವೇದಗಳ ಸರಪಣಿ ಮಾಡಿ
ಆ ಮಹಾಕಾಶಕ್ಕೆ ಕೊಂಡಿಗಳ ಹಾಕಿ ।೧।

ಸರಸಿಜೋದ್ಭವ ಸರಸ್ವತಿ ಭಾರತಿ
ಗರುಡ ಶೇಷ ರುದ್ರರಿವರ ಸತಿಯರು
ಸುರರು ಕಿನ್ನರರು ಕಿಂಪುರುಷ ನಾರದರು
ಪರಿಪರಿ ಗೀತದಿ ತುತಿಸಿ ಪಾಡಿದರು ।೨।

ವಸುದೇವ ಸುತನಾದ ಮುದ್ದು ಮುರಾರಿ
ಅಸುರೆ ಪೂತನಿಯ ಪ್ರಾಣಾಪಹಾರಿ
ಅಸಮ ಸಾಹಸಮಲ್ಲ ದೈತ್ಯರ ವೈರಿ
ಶಿಶುವಾಗಿ ದೇವಕಿಗಾನಂದ ತೋರಿ ।೩।

ಜಗವನು ಹೊಟ್ಟೆಯೊಳಿಂಬಿಟ್ಟೆ ತ್ರುಪ್ವಿ
ಜಗವೆಲ್ಲ ನಿರ್ಮಾಣ ಮಾಡಿದೆ ತ್ರುಪ್ವಿ
ನಿಗಮಗೋಚರ ನಿತ್ಯಾನಂದನೆ ತ್ರುಪ್ವಿ
ಮಗುವೆಂದು ನಾವ್ ತೂಗಬಲ್ಲೆವೆ ತ್ರುಪ್ವಿ ।೪।

ತಮನ ಮರ್ದಿಸಿ ವೇದತತಿಗಳನು ತಂದೆ
ಸುಮನಸರಿಗಾಗಿ ಮಂದರ ಪೊತ್ತು ನಿಂದೆ
ಕ್ಷಮೆಗಾಗಿ ಪೋಗಿ ಹಿರಣ್ಯಕನ ಕೊಂದೆ
ನಮಿಸಿ ಕರೆದರೆ ಕಂಬದಿಂದ್ಪೊರಟು ಬಂದೆ ।೫।

ತರಳನಾಗಿ ಬಲಿಯ ದಾನವ ಬೇಡ್ದೆ
ಪರಶು ಧರಿಸಿ ಕ್ಷತ್ರಿಯರ ಸವರಿದೆ
ದುರುಳ ರಾವಣನ ಶಿರವ ಚೆಂಡಾಡಿದೆ
ಚರಿಸಿ ಮನೆಗಳ ಹಾಲು ಮೊಸರನ್ನು ಕುಡಿದೆ ।೬।

ಬುದ್ಧನಾಗಿ ಪತಿವ್ರತೆರನಾಳಿದೆಯಲ್ಲ
ಮುದ್ದು ತುರಗವೇರಿ ಕಲ್ಕ್ಯನಾದ್ಯಲ್ಲ
ಪದ್ಮನಾಭ ಸಿರಿ ಭಕ್ತವತ್ಸಲ್ಲ
ನಿದ್ರೆಯ ಮಾಡಯ್ಯ ಶ್ರೀರಂಗವಿಟ್ಠಲ ।೭।